ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ    ದಿನಾಂಕ : DATE : 6/7/2020

# ಶಕ್ತಿಸೌಧಗಳ ಜನಪ್ರವೇಶ ನಿಯಂತ್ರಣ

## ಮಧ್ಯಾಹ್ನ 3.30– 4.30ರವರೆಗೆ ಒಂದು ಗಂಟೆ ಮಾತ್ರ ಪ್ರವೇಶಕ್ಕೆ ಅನುವು

**ಬೆಂಗಳೂರು:** ಕೊರೊನಾ ಹಿನ್ನೆಲೆಯಲ್ಲಿ ವಿಧಾನಸೌಧ ಹಾಗೂ ವಿಕಾಸಸೌಧಕ್ಕೆ ಸಾರ್ವಜನಿಕರ ಪ್ರವೇಶ ನಿಯಂತ್ರಿಸುವ ನಿಟ್ಟಿನಲ್ಲಿ ಸಂಜೆ ಒಂದು ಗಂಟೆ ಮಾತ್ರ ಅವಕಾಶ ಕಲ್ಪಿಸಲು ತೀರ್ಮಾನಿಸಲಾಗಿದೆ.

ಮುಖ್ಯಮಂತ್ರಿಯವರು ಕೊರೊನಾ ನಿಯಂತ್ರಣ ಭಾಗವಾಗಿ ವಿಧಾನಸೌಧ ಮತ್ತು ವಿಕಾಸಸೌಧಕ್ಕೆ ಜನದಟ್ಟಣೆ ಕಡಿಮೆ ಮಾಡಲು ಸೂಚನೆ ನೀಡಿದ್ದು ಅದರಂತೆ ನಿತ್ಯ ಸಂಜೆ ಎರಡು ಗಂಟೆ ಬದಲಿಗೆ ಮಧ್ಯಾಹ್ನ 3.30 ರಿಂದ 4.30 ರವರೆಗೆಪ್ರವೇಶಕ್ಕೆ ಅನುವು ಮಾಡಿ. ಕೊಡಲಾಗುವುದು ಎಂದು ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್ ತಿಳಿಸಿದ್ದಾರೆ. ಈ ಮಧ್ಯೆ, ಕೊರೊನಾ ಸೋಂಕಿನ ವಿರುದ್ಧ ರೋಗ ನಿರೋಧಕ ಶಕ್ತಿ ಹೆಚ್ಚಿಸಿಕೊಳ್ಳುವ ಕುರಿತು ಆಯುರ್ವೇದ ವೈದ್ಯ ಡಾ.ವಿನಯ್ ಎಸ್. ಸಿಂಗರಾಜಪುರ ಅವರ ಉಪನ್ಯಾಸ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ವಿಜಯಭಾಸ್ಕರ್ ಅವರು, ಸೋಂಕು ನಿವಾರಣೆಗೆ ಆಯುರ್ವೇದ ಔಷಧ ಅತ್ಯಂತ ಪರಿಣಾಮಕಾರಿಯಾಗಿದೆ. ಕೇಂದ್ರ ಆಯುಷ್ ಇಲಾಖೆ ಸೋಂಕು ನಿವಾರಣೆಗೆ ಸೂಕ್ತ ಮಾರ್ಗದರ್ಶಿ ಸೂತ್ರಗಳನ್ನು ನೀಡಿದೆ. ಅದರಂತೆ ಪ್ರತಿಯೊಬ್ಬರೂ ಆಯುಷ್ ಔಷಧಿಗಳನ್ನು ಬಳಕೆ ಮಾಡಬೇಕು ಎಂದು ಹೇಳಿದರು.



### ಸಚಿವಾಲಯದ ಇಲಾಖೆ ಅಧಿಕಾರಿ–ಸಿಬ್ಬಂದಿಗೆ ಸುತ್ತೋಲೆ

ಕೊರೊನಾ ಹಿನ್ನೆಲೆಯಲ್ಲಿ ಸಚಿವಾಲಯದ ಎಲಲ್ಲಿಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕೆಲವೊಂದು ಕ್ರಮಗಳ ಪಾಲನೆಗೆ ಸೂಚನೆ ನೀಡಲಾಗಿದೆ. ಕಚೇರಿಯಲ್ಲಿ ಕೆಲಸ ಮಾಡುವ ಎಲ್ಲರೂ ಕಡ್ಡಾಯವಾಗಿ ಮಾಸ್ಕ್ ಧರಿಸಿ ಸಾಮಾಜಿಕ ಅಂತರ ಕಾಯ್ದುಕೊಳ್ಳಬೇಕು. ಸ್ಯಾನಿಟೈಸ್ ಬಳಸಬೇಕು. ಸ್ವಚ್ಛತಾ ಸಿಬ್ಬಂದಿ ಮಾಸ್ಕ್ ಹಾಗೂ ಗ್ಲೌಸ್ ಧರಿಸಿ ಕೆಲಸ ಮಾಡಬೇಕು. ಆದಷ್ಟೂ ಲಿಫ್ಟ್ ಬಿಟ್ಟು ಮೆಟ್ಟಿಲು ಬಳಸಬೇಕು. ಕಚೇರಿಗಳಲ್ಲಿ ಗುಂಪು ಗುಂಪಾಗಿ ಸೇರಬಾರದು. ಪದೇ ಪದೆ ಉಪಯೋಗಿಸುವ ಬಾಗಿಲು, ಹ್ಯಾಂಡಲ್, ಮೀಟಿಂಗ್ ಟೇಬಲ್‌ಗೆ ದಿನಕ್ಕೆ ಮೂರ್‍ನಾಲ್ಕು ಬಾರಿ ಸ್ಯಾನಿಟೈಸ್ ಮಾಡಬೇಕು. ಆಗ್ಗಾಗ್ಗೆ ಕೈ ತೊಳೆದುಕೊಳ್ಳಬೇಕು. ಜ್ವರ ನ್ಯುಮೋನಿಯಾದಂತಹ ರೋಗ ಲಕ್ಷಣ ಇದ್ದರೆ ಸಹಾಯವಾಣಿ, ಆರೋಗ್ಯ ಸೇತು ಆ್ಯಪ್ ಬಳಸಿ ಎಂದು ಸುತ್ತೋಲೆ ಹೊರಡಿಸಲಾಗಿದೆ.